ಕರ್ನಾಟಕ ಸರ್ಕಾರ

# ರಾಷ್ಟ್ರೀಯ ಆರೋಗ್ಯ ಅಭಿಯಾನ

## ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಂಘ, ಕೊಪ್ಪಳ.

(ಪಿನ್: 583231) ದೂ.ಸಂ: 9449843115

ಸಂಖ್ಯೆ :ಎನ್‌ಹೆಚ್‌ಎಂ/ಕು.ಕ./ಡಿ.ಕ್ಯೂ.ಎ.ಯು/ಕೊ/ /2025-26 ದಿನಾಂಕ: 11-11-2025

### :: ಗುತ್ತಿಗೆ ನೇಮಕಾತಿ ಅಧಿಸೂಚನೆ ::

ರಾಷ್ಟ್ರೀಯ ಆರೋಗ್ಯ ಅಭಿಯಾನದಡಿಯಲ್ಲಿ ಗುಣಮಟ್ಟ ಖಾತ್ರಿ ಘಟಕದಲ್ಲಿನ ಈ ಕೆಳಕಾಣಿಸಿದ ಕೋಷ್ಟಕದಲ್ಲಿರುವ ಹುದ್ದೆಗಳಿಗೆ ಅನುಮೋದನೆ ಇರುತ್ತದೆ. ಪ್ರತೀ ಆರ್ಥಿಕ ವರ್ಷಗಳಲ್ಲಿ ನವೀಕರಣದ ಷರತ್ತುಗಳನ್ನೊಳಗೊಂಡಂತೆ ಎನ್.ಹೆಚ್.ಎಂ ನಿಯಮಾವಳಿಗಳ ಪ್ರಕಾರ ಗುತ್ತಿಗೆ ಆಧಾರದ ಮೇಲೆ ಈ ಕೆಳಕಂಡ ಹುದ್ದೆಗಳ ನೇಮಕಾತಿಗಾಗಿ ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿಗಳನ್ನು ಅಹ್ವಾನಿಸಿದೆ.

ಖಾಲಿ ಇರುವ ಹುದ್ದೆಯ ವಿವರ:-

| ಕ್ರ.ಸಂ | ಖಾಲಿ ಇರುವ ಹುದ್ದೆಯ ಹೆಸರು | ಹುದ್ದೆಗಳ ಸಂಖ್ಯೆ | ಷರಾ |
|---|---|---|---|
| 1 | ಜಿಲ್ಲಾ ಸಲಹೆಗಾರರು ಗುಣಮಟ್ಟ ಖಾತ್ರಿ ಘಟಕ (District Consultant Quality Assurance Unit) | 01 | ಒಂದೊಂದೇ ಹುದ್ದೆ ಆಗಿರುವುದರಿಂದ ಮೀಸಲಾತಿಯು ಅನ್ವಯಿಸುವುದಿಲ್ಲ. |
| 2 | ಜಿಲ್ಲಾ ಆಸ್ಪತ್ರೆ ಗುಣಮಟ್ಟ ವ್ಯವಸ್ಥಾಪಕರು (District Hospital Quality Manager) | 01 | |
| 3 | ಆಡಳಿತಾತ್ಮಕ ಮತ್ತು ಕಾರ್ಯಕ್ರಮ ಸಹಾಯಕರು (Administrative Cum Programme Assistant) | 01 | |

ನೇಮಕಾತಿ ಸಂಬಂಧಿಸಿದ ವಿದ್ಯಾರ್ಹತೆ/ಅನುಭವದ ವಿವರ :

### 1. District Consultant Quality Assurance (DCQA)

**UG:** MBBS/Dental/AYUSH/Nursing graduate/Bachelor in Public Health.

**PG:** Regular Full Time- Masters in Hospital Administration/Health Management/Master in public Health.

**Experience:** 2 Years of Experience in Public Health/Hospital Administration, Previous experience in the field of Health Field.

**Additional Courses :** Training and experience of implementing a recognized quality system like NABH/ISO 9001:2008/Six Sigma/Lean/Kaizen would be preferred.

**Mandatory Language:** Speaking, Reading, Writting in Kannada Launguage Proficiency is Must.

**Salary Per Month:- 42,500/-**



Scanned with OKEN Scanner

2. <u>**District Hospital Quality Manager (DHQM)**</u>

**UG:** MBBS/Dental/AYUSH/Nursing/Life Sciences/Social Sciences/Bachelor in Public Health.

**PG:** Regular Full time - Masters in Hospital Administration/Health Management/Master in Public Health.

**Experience:** 1 year experience in Public Health/Hospital Administration, previous experience in the field of Health Quality.

**Additional Courses :** Training and experience of implementing a recognised Quality System like NABH/ISO 9001:2008/Six Sigma/Lean/Kaizen would be preferred.

**Mandatory Language**: Speaking, Reading, writing in Kannada Language Proficiency is Must.

**Salary Per Month:- 35,000/-**

3. <u>**Administrative Cum Programme Assistant (ACPA)**</u>

**UG:** Recognised Graduate Degree.

**Experience:** 1 year experience of managing office and providing support to Health Programme/NHM. Candidates having drafting skills would be preferred.

**Additional Courses :** MS Office package and Knowledge of Accountancy would be an added advantage.

**Mandatory Language**: Speaking, Reading, Writing in Kannada Language Proficiency is Must.

**Salary Per Month: 15,939/-**

ಅರ್ಜಿ ಸಲ್ಲಿಸುವ ವಿಧಾನ: ಪ್ರಾಧಿಕಾರದ ವೆಬ್‌ಸೈಟ್ http://www.koppal.nic.in ಆದ ಸದರಿ ಲಿಂಕ್ ಅನ್ನು ಆಯ್ಕೆ ಮಾಡಿ ಆನ್‌ಲೈನ್ ಮುಖಾಂತರ ಅರ್ಜಿಯನ್ನು ಭರ್ತಿ ಮಾಡಬೇಕು. ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸಲು ಪ್ರಾರಂಭಿಕ ದಿನಾಂಕ: **13–11–2025** ಮತ್ತು ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸಲು **ಕೊನೆಯ ದಿನಾಂಕ: 26–11–2025ರ ಸಂಜೆ 05:30ರ** ವರೆಗೆ. ಅಭ್ಯರ್ಥಿಗಳು ಆನ್‌ಲೈನ್ ಮುಖಾಂತರ ಅರ್ಜಿ ಭರ್ತಿ ಮಾಡುವ ಮೊದಲು, ಅರ್ಹತೆಗೆ ಸಂಬಂಧಿಸಿದ ಎಲ್ಲಾ ಸೂಚನೆಗಳನ್ನು ಓದಿಕೊಳ್ಳತಕ್ಕದ್ದು ಹಾಗೂ ನೀಡಿರುವ ಸೂಚನೆಗಳನ್ವಯ ಅರ್ಜಿಯನ್ನು ಭರ್ತಿ ಮಾಡತಕ್ಕದ್ದು.

<u>**ಸಾಮಾನ್ಯ ಸೂಚನೆಗಳು**</u>

- ಒಂದೊಂದೇ ಹುದ್ದೆಯಾಗಿವುದರಿಂದ ಮೀಸಲಾತಿ ಅನ್ವಯಿಸುವುದಿಲ್ಲ.
- ಎನ್.ಹೆಚ್.ಎಂ ಯೋಜನೆಯಡಿಯಲ್ಲಿ ಖಾಲಿ ಇರುವ ಸದರಿ ಹುದ್ದೆಗಳ ನೇಮಕಾತಿಗೆ ಸಲ್ಲಿಸುವ ಅರ್ಜಿಯ ಜೊತೆಗೆ ಸದರಿ ನೇಮಕಾತಿ ಪ್ರಕ್ರಿಯೆಗೆ ಸಂಬಂಧಪಟ್ಟ ಪೂರ್ಣ ವಿವರವನ್ನು ದಾಖಲಾತಿಗಳನ್ನು www.koppal.nic.in ಈ ಜಾಲತಾಣದಲ್ಲಿರುವಂತೆ ಅಭ್ಯರ್ಥಿಗಳು ಕಡ್ಡಾಯವಾಗಿ ಆನ್‌ಲೈನ್ ಮೂಲಕ ಮಾತ್ರ ಅರ್ಜಿ ಸಲ್ಲಿಸತಕ್ಕದ್ದು, ಇದನ್ನು ಹೊರತುಪಡಿಸಿ ಇನ್ನಿತರೆ ಯಾವುದೇ ಮಾರ್ಗದಲ್ಲಿ ಅರ್ಜಿಯನ್ನು ಸಲ್ಲಿಸುವಂತಿಲ್ಲ ಮತ್ತು ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಿದ ನಂತರ ಹೆಚ್ಚುವರಿ ದಾಖಲಾತಿಗಳನ್ನು ಸಲ್ಲಿಸಲು ಅವಕಾಶವಿರುವುದಿಲ್ಲ.
- ಅಭ್ಯರ್ಥಿಗಳು ಭಾರತೀಯ ನಾಗರಿಕನಾಗಿರತಕ್ಕದ್ದು.



Scanned with OKEN Scanner

Health.

- ಅಭ್ಯರ್ಥಿಗಳು ಎಲ್ಲಾ ದಾಖಲೆಗಳನ್ನು ಸ್ಪಷ್ಟವಾಗಿ ಕಾಣುವಂತೆ ಆನ್‌ಲೈನ್ ಮೂಲಕ ಅಪ್‌ಲೋಡ್ ಮಾಡುವುದು ಕಡ್ಡಾಯವಾಗಿರುತ್ತದೆ. ಆನ್‌ಲೈನ್ ಮೂಲಕ ಸಲ್ಲಿಸುವ ಅರ್ಜಿಗಳಲ್ಲಿ ಅಪೂರ್ಣ ಹಾಗೂ ಅಸ್ಪಷ್ಟ ದಾಖಲೆಗಳನ್ನು ಅಥವಾ ಮಾಹಿತಿಗಳನ್ನು ನೀಡಿದಲ್ಲಿ ಅಂತಹ ಅರ್ಜಿಗಳನ್ನು ತಿರಸ್ಕರಿಸಲಾಗುವುದು.
- ಅರ್ಜಿಯನ್ನು ಸಲ್ಲಿಸಲು ನಿಗದಿಪಡಿಸಿರುವ **ಪ್ರಾರಂಭಿಕ ದಿನಾಂಕ: 13-11-2025** ರಿಂದ **ದಿನಾಂಕ: 26-11-2025** ರ **ಸಂಜೆ 05:30** ಗಂಟೆಯೊಳಗಾಗಿ ಅಭ್ಯರ್ಥಿಗಳು ಅರ್ಜಿ ಸಲ್ಲಿಸತಕ್ಕದ್ದು.
- ನೇಮಕಾತಿ ಪ್ರಕಟಣೆಯಲ್ಲಿ ಹುದ್ದೆಯ ಮುಂದೆ ಸೂಚಿಸಿರುವ ನಿಗದಿಪಡಿಸಿದ ವಿದ್ಯಾರ್ಹತೆಯನ್ನು ಅಭ್ಯರ್ಥಿಗಳು ಕಡ್ಡಾಯವಾಗಿ ಹೊಂದಿರಲೇಬೇಕು. ನಿಗದಿಪಡಿಸಿರುವ ವಿದ್ಯಾರ್ಹತೆಯನ್ನು ಹೊರತುಪಡಿಸಿ, ಇತರೆ ಯಾವುದೇ ಸಮಾನಾಂತರ ವಿದ್ಯಾರ್ಹತೆಯನ್ನು ಪರಿಗಣಿಸಲಾಗುವುದಿಲ್ಲ.
- ಕನ್ನಡ ಓದುವುದು, ಬರೆಯುವುದು ಮತ್ತು ಮಾತನಾಡುವುದು (ಕನ್ನಡ ಭಾಷಾ ಜ್ಞಾನ) ಕಡ್ಡಾಯವಾಗಿರುತ್ತದೆ.
- ಅರ್ಜಿಯಲ್ಲಿ ನಮೂದಿಸಿದ ಅಂಕಪಟ್ಟಿ/ಇತರೆ ದಾಖಲಾತಿಗಳಲ್ಲಿ ಯಾವುದೇ ವ್ಯತ್ಯಾಸ ಕಂಡುಬಂದಲ್ಲಿ ಅಂತಹ ಅರ್ಜಿಯನ್ನು ಪರಿಗಣಿಸಲಾಗುವುದಿಲ್ಲ.
- ಈ ನೇಮಕಾತಿ ಪ್ರಕಟಣೆಯನ್ನು, ಯಾವುದೇ ಕಾರಣ ನೀಡದೆ ಯಾವುದೇ ಹಂತದಲ್ಲಿ ಹಿಂದಕ್ಕೆ ಪಡೆಯುವ/ ರದ್ದುಪಡಿಸುವ ಅಧಿಕಾರವನ್ನು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಂಘ ಕೊಪ್ಪಳ ಹೊಂದಿರುತ್ತದೆ. ಅಭ್ಯರ್ಥಿಗಳು ಆಯ್ಕೆಯಾದ ನಂತರ, ಸಲ್ಲಿಸಿರುವ ದಾಖಲಾತಿಗಳ ನೈಜತೆಯನ್ನು ಸಂಬಂಧಪಟ್ಟ ಸಂಸ್ಥೆ/ಪ್ರಾಧಿಕಾರ/ ವಿಶ್ವವಿದ್ಯಾಲಯಗಳಿಂದ ದೃಢೀಕರಿಸಿಕೊಳ್ಳುವ ಹಕ್ಕನ್ನು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಂಘವು ಕಾಯ್ದಿರಿಸಿಕೊಂಡಿದೆ.
- ಸದರಿ ಹುದ್ದೆಗೆ ಅಗತ್ಯವಿರುವ ವಿದ್ಯಾರ್ಹತೆ/ಅನುಭವವನ್ನು ಮಾತ್ರ ಪರಿಗಣಿಸಲಾಗುವುದು. ಸೇವಾನುಭವ ದೃಢೀಕರಣ ಪತ್ರವನ್ನು ಸಲ್ಲಿಸುವವರು ಉದ್ಯೋಗದಾತರಿಂದ ಪಡೆದ ಸೇವಾ ದೃಢೀಕರಣ ಪತ್ರವನ್ನು ಕಡ್ಡಾಯವಾಗಿ ONLINE ನಲ್ಲಿ ಅಪ್‌ಲೋಡ್ ಮಾಡುವುದು ಹಾಗೂ ಮೂಲ ದಾಖಲಾತಿಗಳ ಪರಿಶೀಲನೆ ವೇಳೆ ಮೂಲ ದಾಖಲಾತಿಗಳನ್ನು ಕಡ್ಡಾಯವಾಗಿ ಸಲ್ಲಿಸತಕ್ಕದ್ದು.
- ಅಭ್ಯರ್ಥಿಗಳು Online ಮೂಲಕ ಅರ್ಜಿ ಸಲ್ಲಿಸುವಾಗ ಕಡ್ಡಾಯವಾಗಿ ಹಾಜರುಪಡಿಸಬೇಕಾದ ಎಲ್ಲಾ ಪ್ರಮಾಣ ಪತ್ರಗಳ ಪ್ರತಿಯನ್ನು ಅಪ್‌ಲೋಡ್ ಮಾಡತಕ್ಕದ್ದು, ಮೂಲ ದಾಖಲಾತಿಗಳ ಪರಿಶೀಲನೆಗೆ ಹಾಜರಾಗುವಾಗ ಅರ್ಹ ಅಭ್ಯರ್ಥಿಗಳು Onlineನಲ್ಲಿ ಸಲ್ಲಿಸಿದ ಎಲ್ಲಾ ಪ್ರಮಾಣ ಪತ್ರಗಳ ಮೂಲ ಪ್ರತಿಗಳನ್ನು ತಪ್ಪದೇ ಹಾಜರುಪಡಿಸತಕ್ಕದ್ದು.
- ನೇಮಕಾತಿಗಾಗಿ ಅರ್ಜಿಗಳನ್ನು ಸಲ್ಲಿಸಲು **ಕೊನೆಯ ದಿನಾಂಕ:26-11-2025**ರ ಸಂಜೆ 05:30ರ ವರೆಗೆ ನಿಗದಿಪಡಿಸಲಾಗಿದ್ದು, ಅಭ್ಯರ್ಥಿಗಳು ಅರ್ಜಿ ಸಲ್ಲಿಸುವ ದಿನಾಂಕದಂದು 45 ವರ್ಷ ವಯೋಮಿತಿಯನ್ನು ಮೀರಿರಬಾರದು.

- **<u>ಅಭ್ಯರ್ಥಿಯು ಆನ್‌ಲೈನ್ ಅರ್ಜಿಯೊಂದಿಗೆ ಕಡ್ಡಾಯವಾಗಿ ಸಲ್ಲಿಸಬೇಕಾದ ದಾಖಲಾತಿಗಳು.</u>**
    1. ಎಸ್.ಎಸ್.ಎಲ್.ಸಿ ಅಂಕಪಟ್ಟಿ.
    2. ಸದರಿ ಹುದ್ದೆಗೆ ನಿಗದಿಪಡಿಸಲಾದ ವಿದ್ಯಾರ್ಹತೆಯ ಎಲ್ಲಾ ಸೆಮಿಸ್ಟರ್‌ಗಳ/ವರ್ಷಗಳ ಪದವಿ/ಸ್ನಾತಕೋತ್ತರ ಪದವಿ ಅಂಕಪಟ್ಟಿಗಳು. (ಇಂಟರ್ನ್‌ಶಿಪ್ ಅಂಕಗಳನ್ನು/ತಾತ್ಕಾಲಿಕ ಅಂಕಪಟ್ಟಿಗಳನ್ನು ಪರಿಗಣಿಸುವುದಿಲ್ಲ)
    3. ನಿಗದಿತ ಪದವಿ/PG ಪ್ರಮಾಣ ಪತ್ರಗಳು.
    4. ಸಂಬಂಧಪಟ್ಟ ನೋಂದಣಿ ಪ್ರಾಧಿಕಾರದಲ್ಲಿ ನೋಂದಣಿಯಾದ ಚಾಲ್ತಿಯಲ್ಲಿರುವ ಪ್ರಮಾಣ ಪತ್ರಗಳು.
    5. ಸೇವಾನುಭವ ಪ್ರಮಾಣ ಪತ್ರಗಳು.
    6. ಆಧಾರ್ ಕಾರ್ಡ್.



Scanned with OKEN Scanner

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಂಘವು ನಿಗದಿಪಡಿಸುವ ಸ್ಥಳದಲ್ಲಿ ದಾಖಲಾತಿಗಳ ಪರಿಶೀಲನೆಗೆ ಅಭ್ಯರ್ಥಿಗಳು ಅವರ ಸ್ವಂತ ಖರ್ಚಿನಲ್ಲಿ ಹಾಜರಾಗುವುದು, ಅಭ್ಯರ್ಥಿಗಳು ಆನ್‌ಲೈನ್ ಅರ್ಜಿಜೊತೆಗೆ ಅಪ್‌ಲೋಡ್ ಮಾಡಿದ ಮೂಲ ದಾಖಲಾತಿಗಳನ್ನು ಮಾತ್ರ ಪರಿಶೀಲನೆ ಮಾಡಲಾಗುವುದು. ಮೂಲ ದಾಖಲಾತಿಗಳನ್ನು ಹಾಜರುಪಡಿಸದಿದ್ದಲ್ಲಿ ಅಂತಹ ಅರ್ಜಿಗಳನ್ನು ತಿರಸ್ಕರಿಸಲಾಗುವುದು. ಮೂಲ ದಾಖಲೆಗಳನ್ನು ಪರಿಶೀಲನೆ ಮಾಡುವ ದಿನಾಂಕವನ್ನು ಪತ್ರಿಕೆಗಳಲ್ಲಿ/www.koppal.nic.in ತಿಳಿಸಲಾಗುವುದು. ಅಭ್ಯರ್ಥಿಗಳ ಆಯ್ಕೆ ಬಗ್ಗೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಂಘದ ನೇಮಕಾತಿ ಪ್ರಾಧಿಕಾರದ ನಿರ್ಣಯವೇ ಅಂತಿಮವಾಗಿರುತ್ತದೆ.

- ಭಾವಚಿತ್ರ ಮತ್ತು ಮಾದರಿ ಸಹಿ:100ಕೆ.ಬಿ ಗಿಂತ ಕಡಿಮೆ ಗಾತ್ರ ಇರುವ ಪಾಸ್‌ಪೋರ್ಟ್ ಭಾವ ಚಿತ್ರವನ್ನು ಅಪ್‌ಲೋಡ್ ಮಾಡತಕ್ಕದ್ದು ಮತ್ತು 50 ಕೆ.ಬಿ ಗಿಂತ ಕಡಿಮೆ ಗಾತ್ರವಿರುವ ಮಾದರಿ ಸಹಿಯ ಚಿತ್ರವನು ಸ್ಕ್ಯಾನ್ ಮಾಡಿ ಅಪ್‌ಲೋಡ್ ಮಾಡತಕ್ಕದ್ದು.

ಉಪಾಧ್ಯಕ್ಷರು,
ಜಿಲ್ಲಾ ಆರೋಗ್ಯ ಮತ್ತು ಕುಟುಂಬ
ಕಲ್ಯಾಣ ಸಂಘ ಹಾಗೂ ಜಿಲ್ಲಾ ಆರೋಗ್ಯ
ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು,
ಕೊಪ್ಪಳ ಜಿಲ್ಲೆ, ಕೊಪ್ಪಳ.

Scanned with OKEN Scanner